# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2091(2425)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ. ಎಂ. ಫಾರೂಖ್(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ಸಹಕಾರ ಸಚಿವರು

ವಿಷಯ : ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನಲ್ಲಿ ಸಾಫ್ಟ್‌ವೇರ್ ಖರೀದಿಸಿರುವ ಬಗ್ಗೆ

(ಅ) ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ಕೇಂದ್ರ ಕಛೇರಿ ಸೇರಿದಂತೆ ವಿವಿಧ ಶಾಖೆಗಳ ಕಛೇರಿಗಳಲ್ಲಿರುವ ಕಂಪ್ಯೂಟರ್‌ಗಳಿಗೆ ಉಪಯೋಗಿಸುತ್ತಿರುವ ಸಾಫ್ಟ್‌ವೇರ್ ಯಾವುದು; ಸದರಿ ಸಾಫ್ಟ್‌ವೇರ್‌ನ್ನು ಯಾರಿಂದ ಯಾವ ದಿನಾಂಕದಂದು ಖರೀದಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಇತ್ತೀಚೆಗೆ ಸದರಿ ಬ್ಯಾಂಕಿನ ಕೇಂದ್ರ ಕಛೇರಿಯ ಕಂಪ್ಯೂಟರ್‌ಗಳಿಗೆ ಸಾಫ್ಟ್‌ವೇರ್ ತಯಾರಿಸಲು ನ್ಯಾಷನಲ್ ಇನ್‌ಫಾರ್ಮೆಟಿಕ್ ಸೆಂಟರ್‌ರವರಿಗೆ ಸುಮಾರು 28 ಲಕ್ಷ ರೂಪಾಯಿ ಮೊತ್ತವನ್ನು ಯಾವುದೇ ಎಂಒಯು ಮಾಡಿಕೊಳ್ಳದೆ ಪಾವತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಹಿಂದೆ ಮ್ಯಾನ್ ಪವರ್ ಇಲ್ಲವೆಂದು ಸಾಫ್ಟ್‌ವೇರ್ ಮಾಡಲು ನಿರಾಕರಿಸಿದ ನ್ಯಾಷನಲ್ ಇನ್‌ಫಾರ್ಮೆಟಿಕ್ ಸೆಂಟರ್‌ರವರಿಗೆ ಅಕ್ರಮವಾಗಿ 28 ಲಕ್ಷ ರೂಪಾಯಿಗಳನ್ನು ಪಾವತಿಸಿರುವ ಅಧಿಕಾರಿ ಯಾರು; ಯಾವ ದಿನಾಂಕದಂದು ಸದರಿ ಮೊತ್ತವನ್ನು ಪಾವತಿಸಲಾಗಿರುತ್ತದೆ; (ಮಾಹಿತಿ ಒದಗಿಸುವುದು)

(ಇ) ಸದರಿ ಮೊತ್ತವನ್ನು ವಸೂಲಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ; ಎಷ್ಟು ಮೊತ್ತ ವಸೂಲಿ ಮಾಡಲಾಗಿದೆ; ವಸೂಲಾಗದ ಮೊತ್ತವನ್ನು ಯಾರಿಂದ ಯಾವಾಗ ವಸೂಲಿ ಮಾಡಲಾಗುವುದು; ಹಾಗೂ ಈ ಅಕ್ರಮಕ್ಕೆ ಕಾರಣರಾದ ಅಧಿಕಾರಿ ಮೇಲೆ ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ಒದಗಿಸುವುದು)